**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**19.03.2024 / 18.40 hrs**

ಮುಖ್ಯಾಂಶಗಳು

೧. ೨೦೨೪ರ ಸಾರ್ವತ್ರಿಕ ಚುನಾವಣೆಯ ಮೊದಲ ಹಂತಕ್ಕೆ ನಾಳೆ ಅಧಿಸೂಚನೆ ಪ್ರಕಟ ; ಏಪ್ರಿಲ್ ೧೯ಕ್ಕೆ ಮತದಾನ

೨. ಜಿಲ್ಲಾ ಮಟ್ಟದಲ್ಲಿ ಮತದಾನದ ಶೇಕಡಾವಾರು ಪ್ರಮಾಣ ಹೆಚ್ಚಳಕ್ಕೆ ಸ್ವೀಪ್ ಸಮಿತಿಗಳ ಆರಂಭ

೩. ದೇಶದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ ಜಾರಿಗೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ನಕಾರ

೪. ಮಾನವ ಕಳ್ಳಸಾಗಾಟದಿಂದ ಮಹಿಳೆ ಮತ್ತು ಬಾಲಕಿಯರ ರಕ್ಷಣೆಗೆ, ರಾಷ್ಟ್ರೀಯ ಮಹಿಳಾ ಆಯೋಗ ಮತ್ತು ರೈಲ್ವೆ ರಕ್ಷಣಾಪಡೆ ಒಪ್ಪಂದ

<><*<><>*><>

೨೦೨೪ರ ಸಾರ್ವತ್ರಿಕ ಚುನಾವಣೆಯ ಮೊದಲ ಹಂತಕ್ಕೆ ನಾಳೆ ಅಧಿಸೂಚನೆ ಪ್ರಕಟವಾಗಲಿದ್ದು, ಬಹುತೇಕ ಎರಡು ತಿಂಗಳಿಗೂ ಹೆಚ್ಚಿನ ಅವಧಿಯಲ್ಲಿ ನಡೆಯಲಿರುವ ಪ್ರಜಾಪ್ರಭುತ್ವ ಉತ್ಸವಕ್ಕೆ ದೇಶ ಸಜ್ಜಾಗುತ್ತಿದೆ. ಚುನಾವಣೆಗಳ ಸಂದರ್ಭದಲ್ಲಿ ಎದುರಾಗಬಹುದಾದ ಯಾವುದೇ ಸವಾಲಿನ ನಿರ್ವಹಣೆಗೆ ಸೂಕ್ತ ವ್ಯವಸ್ಥೆಗಳು ದೇಶಾದ್ಯಂತ ಕಾರ್ಯಾರಂಭ ಮಾಡಿವೆ. ಈಗಾಗಲೇ ವರದಿಯಾಗಿರುವಂತೆ ಈ ಬಾರಿ ಲೋಕಸಭೆ ಚುನಾವಣೆ ಒಟ್ಟು ೭ ಹಂತಗಳಲ್ಲಿ ನಡೆಯಲಿದ್ದು, ಜೂನ್ ೪ ರಂದು ಮತ ಎಣಿಕೆ ನಿಗದಿಯಾಗಿದೆ. ಏಪ್ರಿಲ್ ೧೯ ರಂದು ನಡೆಯುವ ಮೊದಲ ಹಂತದ ಚುನಾವಣೆಯಲ್ಲಿ ೧೭ ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳ ೧೦೨ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯುವುದು. ನಾಮಪತ್ರಗಳ ಸಲ್ಲಿಕೆಗೆ ಈ ತಿಂಗಳ ೨೭ ಕಡೆಯ ದಿನ. ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ, ಯಾವುದೇ ಅಕ್ರಮಗಳಿಗೆ ಅವಕಾಶವಿಲ್ಲದಂತೆ ನಡೆಸಲಾಗುವುದು ಎಂದು ಕೇಂದ್ರ ಚುನಾವಣಾ ಆಯೋಗ ಭರವಸೆ ನೀಡಿದೆ. ಹಣಬಲ, ತೋಳ್ಬಲ, ಸುಳ್ಳು ಸುದ್ದಿ ಪ್ರಚಾರ ಮತ್ತು ಮಾದರಿ ನೀತಿ ಸಂಹಿತೆ ನಿಯಮಗಳ ಉಲ್ಲಂಘನೆ ಪ್ರಕರಣಗಳನ್ನು ಅತ್ಯಂತ ಕಟ್ಟುನಿಟ್ಟಾಗಿ ನಿರ್ವಹಿಸಲಾಗುವುದು. ದೇಶಾದ್ಯಂತ, ರಾಜ್ಯ ಮತ್ತು ಜಿಲ್ಲಾ ಗಡಿ ಪ್ರದೇಶಗಳಲ್ಲಿ ೨೪ ತಾಸು ಕಾರ್ಯ ನಿರ್ವಹಿಸುವ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು, ಮುಂಬರುವ ದಿನಗಳಲ್ಲಿ ಅಕ್ರಮಗಳ ಮೇಲೆ ನಿಗಾ ಇಡಲು ಡ್ರೋನ್ ವಿಮಾನಗಳನ್ನು ಬಳಸಲಾಗುವುದು ಎಂದು ಆಯೋಗ ತಿಳಿಸಿದೆ.

<><*<><>*><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಸಿದ್ಧತೆ ಬಿರುಸಿನಿಂದ ನಡೆಯುತ್ತಿದೆ. ಮತದಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿ ಶೇಕಡಾವಾರು ಮತದಾನದ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿಗಳು ಸಜ್ಜಾಗುತ್ತಿವೆ. ಮೈಸೂರು ಜಿಲ್ಲೆಯಲ್ಲಿ ನಡೆದ ಸ್ವೀಪ್ ಕಾರ್ಯಕ್ರಮದಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಇರುವುದನ್ನು ಪರಿಶೀಲಿಸಲು ಆನ್‌ಲೈನ್ ಆಪ್ ಬಳಸಬೇಕು. ಜಿಲ್ಲೆಯ ಎಲ್ಲ ವೈದ್ಯಾಧಿಕಾರಿಗಳು ತಾವು ನೀಡುವ ಹೊರರೋಗಿಗಳ ವಿಭಾಗ ಚೀಟಿಯಲ್ಲಿ ಕಡ್ಡಾಯವಾಗಿ ಪ್ರಸ್ತುತ ಲೋಕಸಭಾ ಚುನಾವಣೆಯ ಘೋಷವಾಕ್ಯವಾದ 'ಚುನಾವಣಾ ಪರ್ವ-ದೇಶದ ಗರ್ವ' ಎಂದು ಮುದ್ರಿಸಿ ಬಳಸಬೇಕು. ಜಿಲ್ಲೆಯ ಎಲ್ಲಾ ಮೆಡಿಕಲ್ ಸ್ಟೋರ್‌ಗಳಲ್ಲಿ ಚುನಾವಣಾ ಜಾಗೃತಿ ಸಂದೇಶಗಳನ್ನು ಪ್ರದರ್ಶಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಕೆ.ಎಂ. ಗಾಯತ್ರಿ ಹೇಳಿದರು. ವಿಜಯಪುರ ಜಿಲ್ಲೆಯಲ್ಲಿ ೨೦೧೯ರ ಚುನಾವಣೆಯಲ್ಲಿ ಕಡಿಮೆ ಮತದಾನ ಆಗಿರುವ ಬೂತ್‌ಗಳನ್ನು ಗುರುತಿಸಿ ಮತದಾರರಿಗೆ ಜಾಗೃತಿ ಮೂಡಿಸಬೇಕು. ನೌಕರಿಗಾಗಿ ಹೊರಜಿಲ್ಲೆ ಅಥವಾ ರಾಜ್ಯಕ್ಕೆ ವಲಸೆ ಹೋಗಿರುವವರನ್ನು ಗುರುತಿಸಿ ಮತದಾನ ಮಾಡುವಂತೆ ಪ್ರೋತ್ಸಾಹಿಸಬೇಕು. ಆಸ್ಪತ್ರೆ, ಬಸ್‌ನಿಲ್ದಾಣ, ಶಾಲಾ-ಕಾಲೇಜು ಮತ್ತಿತರ ಸಾರ್ವಜನಿಕ ಸ್ಥಳಗಳಲ್ಲಿ ಮತದಾನದ ಮಹತ್ವ ಸಾರುವ ಬಿತ್ತಿಪತ್ರಗಳನ್ನು ಪ್ರದರ್ಶಿಸಬೇಕು. ಸ್ವ-ಸಹಾಯ ಸಂಘಗಳ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾದ ರಿಶಿ ಆನಂದ್ ಅಧಿಕಾರಿಗಳಿಗೆ ಸೂಚಿಸಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಗೆ ಮತದಾನ ಪ್ರಮಾಣ ಹೆಚ್ಚಿಸುವ ಸಲುವಾಗಿ ಮಹಿಳಾ ಮತದಾರರಿಗೆ ಮೀಸಲಾದ 'ಸಖಿ ಮತಗಟ್ಟೆ' ಹಾಗೂ ಯುವ ಮತದಾರರಿಗಾಗಿ 'ಯಂಗ್ ಬೂತ್'ಗಳನ್ನು ಸ್ಥಾಪಿಸಲು ಜಿಲ್ಲಾ ಸ್ವೀಪ್ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ. ಕಳೆದ ಬಾರಿ ಚಿತ್ರದುರ್ಗ ಜಿಲ್ಲೆಯಲ್ಲಿ ಶೇಕಡ ೭೦.೭೧ರಷ್ಟು ಮತದಾನವಾಗಿತ್ತು. ಜಿಲ್ಲೆಯ ನಗರ ಪ್ರದೇಶದಲ್ಲಿ ವಿವಿಧ ಚಟುವಟಿಕೆಗಳ ಮೂಲಕ ಮತದಾನ ಪ್ರಮಾಣ ಹೆಚ್ಚಳಕ್ಕೆ ಅರಿವು ಮೂಡಿಸಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ. ತುಮಕೂರು ಜಿಲ್ಲೆಯಲ್ಲಿ ಮತದಾರರ ಜಾಗೃತಿಗೆ ಜಾಥಾ ಕಾರ್ಯಕ್ರಮ ನಡೆಯಿತು. ೧೮ ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಮತದಾನ ಮಾಡಬೇಕು. ಯುವ ಮತದಾರರು ತಮ್ಮ ಮನೆಯಲ್ಲಿ ಎಲ್ಲರೂ ಮತದಾನ ಮಾಡುವಂತೆ ತಿಳಿಸಬೇಕು. ಯಾವುದೇ ಆಮಿಷಕ್ಕೆ ಬಲಿಯಾಗಬಾರದು ಎಂದು ಜಿಲ್ಲಾಧಿಕಾರಿ ಶುಭಾಕಲ್ಯಾಣ್ ಮನವಿ ಮಾಡಿದರು. ಗದಗ ಜಿಲ್ಲೆಯಲ್ಲಿ ಚುನಾವಣಾ ಪ್ರಚಾರ ಸಾಮಗ್ರಿಗಳ ಮುದ್ರಣ ಕಾರ್ಯ ನಿರ್ವಹಿಸುವ ಪ್ರಿಂಟಿಂಗ್ ಪ್ರೆಸ್ ಮಾಲೀಕರ ಸಭೆಯನ್ನು ಇಂದು ನಡೆಸಲಾಯಿತು. ಚುನಾವಣಾ ಆಯೋಗ ನೀಡಿರುವ ಮಾರ್ಗಸೂಚಿಯನ್ನು ಮುದ್ರಕರು ಪಾಲಿಸಬೇಕು. ಉಲ್ಲಂಘನೆಯಾದಲ್ಲಿ ಜೈಲುಶಿಕ್ಷೆ ಮತ್ತು ದಂಡ ವಿಧಿಸಲಾಗುವುದು. ಪ್ರಚಾರ ಸಾಮಗ್ರಿ ಮುದ್ರಣದಲ್ಲಿ ಆಯೋಗದ ನಿರ್ದೇಶನ ಪಾಲನೆ ಕಡ್ಡಾಯವಾಗಿರುತ್ತದೆ ಎಂದು ವೈಶಾಲಿ ಎಂ.ಎಲ್. ನಿರ್ದೇಶಿಸಿದರು. ಚಿಕ್ಕಮಗಳೂರು ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ ನೀತಿ ಸಂಹಿತೆ ಜಾರಿಗೆ ಬಂದಿರುವುದರಿಂದ ಚುನಾವಣಾ ಪ್ರಚಾರಕ್ಕೆ ಅನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ತಿಳಿಸಿದ್ದಾರೆ. ವಾಹನ ಪರವಾನಗಿ, ಸ್ಟಾರ್ ಪ್ರಚಾರಕರು, ಪಕ್ಷದ ಪದಾಧಿಕಾರಿಗಳಿಗೆ ವಾಹನ ಅನುಮತಿ, ರಾಜಕೀಯ ಸಭೆ ಸಮಾರಂಭ, ಪ್ರಚಾರ, ವೀಡಿಯೋ ವ್ಯಾನ್ ಅನುಮತಿಯನ್ನು ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳಿಂದ ಪಡೆಯಬೇಕು. ಹೆಲಿಕಾಪ್ಟರ್ ಮತ್ತು ಹೆಲಿಪ್ಯಾಡ್, ಹೊರ ಜಿಲ್ಲೆಗಳ ವಾಹನ ಪರವಾನಗಿಯನ್ನು ಜಿಲ್ಲಾ ಚುನಾವಣಾಧಿಕಾರಿಗಳಿಂದ ಪಡೆಯುವುದು ಕಡ್ಡಾಯ ಎಂದು ಅವರು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಇಂದು ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ವಿದ್ಯುನ್ಮಾನ ಮತಯಂತ್ರ ರ್‍ಯಾಂಡಮೈಜೇಷನ್ ಪ್ರಕ್ರಿಯೆ ನಡೆಸಲಾಯಿತು.

<><*<><>*><>

ಲೋಕಸಭಾ ಚುನಾವಣೆಗೆ ಟಿಕೆಟ್ ಹಂಚಿಕೆ ಕುರಿತಂತೆ ಅಸಮಾಧಾನಗೊಂಡಿರುವ ತಮ್ಮ ಪಕ್ಷದ ಕೆಲವು ಹಿರಿಯ ನಾಯಕರ ಮನವೊಲಿಕೆಗೆ ಪ್ರಯತ್ನ ಮುಂದುವರೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟಿಕೆಟ್ ವಿಚಾರದಲ್ಲಿ ಪಕ್ಷದ ಹೈಕಮಾಂಡ್ ನಿರ್ಧಾರವೇ ಅಂತಿಮವಾಗಿರುತ್ತದೆ. ಆದಾಗ್ಯೂ ಅಸಮಾಧಾನ ಶಮನಕ್ಕೆ ಪಕ್ಷದ ವರಿಷ್ಠರು ಪ್ರಯತ್ನಿಸಲಿದ್ದಾರೆ ಎಂದರು. ಪಕ್ಷದ ಅಭ್ಯರ್ಥಿಗಳ ಎರಡನೇ ಪಟ್ಟಿ ಸದ್ಯದಲ್ಲೇ ಬಿಡುಗಡೆಯಾಗಲಿದೆ. ಬಿಜೆಪಿ-ಜೆಡಿಎಸ್ ಚುನಾವಣಾ ಮೈತ್ರಿ ಸುಸೂತ್ರವಾಗಿ ಮುಂದುವರೆಯಲಿದೆ. ಸಣ್ಣಪುಟ್ಟ ವ್ಯತ್ಯಾಸಗಳಿದ್ದಲ್ಲಿ ಉಭಯ ಪಕ್ಷಗಳ ವರಿಷ್ಠರು ಮಾತುಕತೆ ಮೂಲಕ ಬಗೆಹರಿಸಿಕೊಳ್ಳುವ ವಿಶ್ವಾಸವಿದೆ ಎಂದು ವಿಜಯೇಂದ್ರ ಹೇಳಿದರು.

<><*<><>*><>

೨೦೨೪ರ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪ್ರಣಾಳಿಕೆ ಕುರಿತು ಪಕ್ಷದ ಕಾರ್ಯಕಾರಿ ಸಮಿತಿ ದೆಹಲಿಯಲ್ಲಿಂದು ಚರ್ಚಿಸಿತು. ಪಕ್ಷದ ಹಿರಿಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಸೇರಿದಂತೆ ಹಲವರು ಸಭೆಯಲ್ಲಿ ಪಾಲ್ಗೊಂಡಿದ್ದರು. ಪಕ್ಷದ ಪ್ರಣಾಳಿಕೆಗೆ ಅಂತಿಮ ಒಪ್ಪಿಗೆ ಸೂಚಿಸುವ ಅಧಿಕಾರವನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ವಹಿಸಲಾಗಿದೆ ಎಂದು ಸಭೆಯ ನಂತರ ಕೆ.ಸಿ.ವೇಣುಗೋಪಾಲ್ ತಿಳಿಸಿದ್ದಾರೆ.

<><*<><>*><>

ಲೋಕಸಭಾ ಚುನಾವಣೆಗೆ ಬಿಜೆಪಿ ಮತ್ತು ಜೆಡಿಎಸ್ ನಡುವಣ ಮೈತ್ರಿ ಕುರಿತು ಕಾಂಗ್ರೆಸ್ ನಾಯಕರು ಅಪ್ರಸ್ತುತ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಆದರೆ ಉಭಯ ಪಕ್ಷಗಳ ಮೈತ್ರಿ ಪ್ರಯತ್ನ ದುರ್ಬಲವಾಗಿಲ್ಲ ಎಂದು ಜೆಡಿಎಸ್ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲೋಕಸಭೆ ಚುನಾವಣೆಗೆ ರಾಜ್ಯದಿಂದ ಜೆಡಿಎಸ್‌ಗೆ ಮೂರು ಸ್ಥಾನಗಳನ್ನು ಕೇಳಲಾಗಿದೆ. ಬಿಜೆಪಿ ಹೈಕಮಾಂಡ್ ಈ ಬೇಡಿಕೆಯನ್ನು ಗೌರವಯುತವಾಗಿ ಕಂಡಿದೆ. ತಮ್ಮ ಪಕ್ಷದ ಬೇಡಿಕೆ ಈಡೇರುವ ವಿಶ್ವಾಸವಿದೆ. ಆದಾಗ್ಯೂ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಸೂಕ್ತವಾಗಿ ಬಗೆಹರಿಸಿಕೊಳ್ಳಲಾಗುವುದು ಎಂದು ಅವರು ಹೇಳಿದರು. ಯಾವ ಪಕ್ಷದೊಂದಿಗೆ ಚುನಾವಣೆ ಮೈತ್ರಿ ಮಾಡಿಕೊಳ್ಳುವುದು ಕ್ಷೇಮ ಎನ್ನುವುದನ್ನು ತಾವು ಕಾಂಗ್ರೆಸ್‌ನಿಂದ ಕಲಿಯಬೇಕಾಗಿಲ್ಲ ಎಂದು ಕುಮಾರಸ್ವಾಮಿ ಹೇಳಿದರು.

<><*<><>*><>

ದೇಶದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ ಜಾರಿಗೆ ತಡೆಯಾಜ್ಞೆ ನೀಡಲು ಸುಪ್ರಿಂಕೋರ್ಟ್ ಇಂದು ನಿರಾಕರಿಸಿದೆ. ಕಾಯ್ದೆಗೆ ಸಂಬಂಧಿಸಿದಂತೆ ಕಳೆದ ವಾರ ಹೊರಡಿಸಲಾಗಿರುವ ನಿಯಮಾವಳಿಯನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ, ೨೩೭ ಅರ್ಜಿಗಳಿಗೆ ಸಂಬಂಧಿಸಿದಂತೆ ಪ್ರತಿಕ್ರಿಯೆ ಸಲ್ಲಿಸಲು ನ್ಯಾಯಲಯ, ಕೇಂದ್ರ ಸರ್ಕಾರಕ್ಕೆ ಮೂರು ವಾರಗಳ ಸಮಯ ನಿಗದಿಪಡಿಸಿದೆ. ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್, ನ್ಯಾಯಮೂರ್ತಿ, ಜೆ.ಬಿ.ಪರ್ದಿವಾಲ ಹಾಗೂ ನ್ಯಾಯಮೂರ್ತಿ ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠ ಅರ್ಜಿಗಳ ವಿಚಾರಣೆ ನಡೆಸಿತು. ಪ್ರಕರಣದ ಮುಂದಿನ ವಿಚಾರಣೆಯನ್ನು ಏಪ್ರಿಲ್ ೯ಕ್ಕೆ ನಿಗದಿಪಡಿಸಲಾಗಿದೆ.

<><*<><>*><>

ಮಾನವ ಕಳ್ಳಸಾಗಣೆ ಪಿಡುಗನ್ನು ನಿಯಂತ್ರಿಸುವ ಉದ್ದೇಶದಿಂದ ರಾಷ್ಟ್ರೀಯ ಮಹಿಳಾ ಆಯೋಗ ಮತ್ತು ರೈಲ್ವೆ ರಕ್ಷಣಾ ಪಡೆ ನಡುವೆ ದೆಹಲಿಯಲ್ಲಿ ಒಪ್ಪಂದ ಪತ್ರಕ್ಕೆ ಸಹಿ ಹಾಕಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷರಾದ ರೇಖಾಶರ್ಮ, ರೈಲು ನಿಲ್ದಾಣಗಳಲ್ಲಿ ಕಾರ್ಯನಿರ್ವಹಿಸುವ ರೈಲ್ವೆ ರಕ್ಷಣಾ ಪಡೆಯ ಸಿಬ್ಬಂದಿ, ಮಹಿಳೆಯರು ಮತ್ತು ಮಕ್ಕಳ ಮೇಲೆ ನಡೆಯುವ ಅಪರಾಧ ಪ್ರಕರಣಗಳನ್ನು ಹತ್ತಿಕ್ಕುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಾರೆ ಎಂದರು. ಶೇಕಡಾ ೮೦ರಷ್ಟು ಮಾನವ ಕಳ್ಳ ಸಾಗಾಟ ಪ್ರಕರಣಗಳಲ್ಲಿ, ಮಹಿಳೆಯರು ಮತ್ತು ಬಾಲಕಿಯರೇ ಬಲಿಪಶುಗಳಾಗಿರುತ್ತಾರೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು. ರೈಲ್ವೆ ರಕ್ಷಣಾ ಪಡೆ - ಆರ್‌ಪಿಎಫ್ ನ ಪ್ರಧಾನ ನಿರ್ದೇಶಕ ಮನೋಜ್ ಯಾದವ್ ಮಾತನಾಡಿ, ಮಹಿಳೆಯರಿಗೆ ಸುರಕ್ಷಿತ ಮತ್ತು ಸುಭದ್ರ ಪ್ರಯಾಣದ ಭರವಸೆ ನೀಡುವುದೇ, ಇಂದು ಆಗಿರುವ ಒಪ್ಪಂದದ ಪ್ರಮುಖ ಉದ್ದೇಶವಾಗಿದೆ ಎಂದರು. ಮಾನವ ಕಳ್ಳ ಸಾಗಾಟ ಸೇರಿದಂತೆ ಮಹಿಳೆಯರ ಮೇಲಿನ ಯಾವುದೇ ದೌರ್ಜನ್ಯಗಳಿಗೂ, ರೈಲ್ವೆ ಜಾಲದ ಬಳಕೆಗೆ ಅವಕಾಶವಾಗದಂತೆ ಆರ್‌ಪಿಎಫ್ ಕಟ್ಟೆಚ್ಚರ ವಹಿಸುತ್ತದೆ ಎಂದರು.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯಾದ್ಯಂತ ಒಣಹವೆ ಮುಂದುವರೆದಿದೆ. ಗರಿಷ್ಠ ತಾಪಮಾನ ೩೮.೯ ಡಿಗ್ರಿ ಸೆಲ್ಸಿಯಸ್ ಕೊಪ್ಪಳದಲ್ಲಿ ಹಾಗೂ ಕನಿಷ್ಠ ತಾಪಮಾನ ೧೭ ಡಿಗ್ರಿ ಸೆಲ್ಸಿಯಸ್ ವಿಜಯಪುರದಲ್ಲಿ ದಾಖಲಾಗಿದೆ. ಬೆಂಗಳೂರು ಮತ್ತು ಸುತ್ತಮುತ್ತ ಭಾಗಶಃ ಮೋಡಕವಿದ ವಾತಾವರಣವಿದ್ದು, ಗರಿಷ್ಠ ೩೫, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>